**<u>ಹೆಚ್ಚುವರಿ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ</u>**

**ಸಿಸಿ ನಂ. 3837/2021**

| | | | |
|---|---|---|---|
| **ಹೆಸರು** | **:** | **ಸುನಿತಾ** | ಚಾ.ಸಾ. 4 |
| **ಗಂಡನ ಹೆಸರು** | **:** | **ಸೋಮಶೇಖರ** | ಪ್ರಾ.ಸಾ. 6 |
| **ವಯಸ್ಸು** | **:** | **38 ವರ್ಷ** | ದಿನಾಂಕಃ 15-03-2025 |
| **ಉದ್ಯೋಗ** | **:** | **ಅಡಿಗೆ ಕೆಲಸ** | |
| **ವಾಸಸ್ಥಳ** | **:** | **ಪರದಾರ ಮೋತಕಪಳ್ಳಿ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ಚಾಸಾ 1 ರವರು ನನ್ನ ಗಂಡ. ಚಾಸಾ 7 ನನ್ನ ಮಗ. ಚಾಸಾ 5 ಮತ್ತು 6 ರವರು ನಮ್ಮ ಊರಿನವರು. ಆರೋಪಿತರೆಲ್ಲರೂ ನಮ್ಮ ಸಂಬಂಧಿಕರು.

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಯಾವುದೇ ಜಗಳ ನೋಡಿಲ್ಲ ಮತ್ತು ಬಿಡಿಸಿಲ್ಲ. ನಾನು ಪೋಲಿಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಹೇಳಿಕೆಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ-</u>**

ದಿನಾಂಕಃ 08-06-2021 ರಂದು ಬೆಳಿಗ್ಗೆ 12-30 ಗಂಟೆ ಸುಮಾರಿಗೆ ಆರೋಪಿತರೆಲ್ಲರೂ ಬಂದು ನನ್ನ ಗಂಡನಿಗೇ ಅವಾಚ್ಯ ಶಬ್ದಗಳಿಂದ ಬೈದು ಹೊಡೆಬಡೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ಮಧ್ಯಾಹ್ನ .3-30 ಗಂಟೆ ಸುಮಾರಿಗೆ ನನ್ನ ಗಂಡ ಆರೋಪಿತರ ಮನೆ ಹತ್ತಿರ ಹೋದಾಗ ಆರೋಪಿತರೆಲ್ಲರೂ ನನ್ನ ಗಂಡನಿಗೆ ಕೈಯಿಂದ ಬೆನ್ನಿನ ಮೇಲೆ ಬಡಿಗೆಯಿಂದ ಹೊಡೆದಿದ್ದರು ಎಂದರೆ ಸರಿಯಲ್ಲ. ಆರೋಪಿತರು ನನ್ನ ಸೀರೆ ಮತ್ತು ತಲೆ ಕೂದಲು ಹಿಡಿದು ಎಳೆದಾಡಿ ಅವಮಾನ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ನನ್ನ ಗಂಡನಿಗೆ ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಪಿ 8 ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ ಆರೋಪಿತರ ಪರವಾಗಿ ಶ್ರೀ VBD ವಕೀಲರಿಂದಃ- ಇಲ್ಲಾ.</u>**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**
**ಓ.ಹೇ.ಕೇ. ಸರಿ ಇದೆ.**

**C/C ಹೆಚ್ಚುವರಿ ಪ್ರ.ದ.ನ್ಯಾ.ದಂ. ಚಿಂಚೋಳಿ**